**NOVEMBER 6, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ವಿಧಾನಸಭಾ** ಉಪಚುನಾವಣೆ: ವಿವಿಧ ರಾಜಕೀಯ ಪಕ್ಷಗಳ ಮುಖಂಡರಿಂದ ಬಿರುಸಿನ ಪ್ರಚಾರ.

- **ಗ್ಯಾರಂಟಿ ಯೋಜನೆಗಳು** ಜನರ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ತಂದಿವೆ–ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್.

- **ಬೆಳಗಾವಿಯಲ್ಲಿ ನಡೆದ** ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆಗೆ ಸರ್ಕಾರದ ನಿರ್ಧಾರ– ಕಾನೂನು ಸಚಿವ ಎಚ್.ಕೆ. ಪಾಟೀಲ್.

- **ಮುಡಾ ನಿವೇಶನ ಹಂಚಿಕೆ** ಪ್ರಕರಣ: ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಿಬಿಐಗೆ ಹೈಕೋರ್ಟ್ ನೋಟಿಸ್

**ಈಗ ವಾರ್ತೆಗಳ ವಿವರ**

*******

**ರಾಜ್ಯದಲ್ಲಿ ವಿಧಾನಸಭಾ** ಉಪಚುನಾವಣೆ ಪ್ರಚಾರ ರಂಗೇರಿದ್ದು, ವಿವಿಧ ರಾಜಕೀಯ ಪಕ್ಷಗಳ ಮುಖಂಡರು ತಮ್ಮ ಪಕ್ಷಗಳ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರದಲ್ಲಿ ತೊಡಗಿದ್ದಾರೆ. ಹಾವೇರಿ ಜಿಲ್ಲೆ ಶಿಗ್ಗಾಂವ ವಿಧಾನಸಭಾ ಕ್ಷೇತ್ರದದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಅಹ್ಮದಖಾನ್ ಪಠಾಣ ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಶಿವಾನಂದ ಪಾಟೀಲ, ಎಚ್. ಆಂಜನೇಯ, ಈಶ್ವರ ಖಂಡ್ರೆ, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್ ಸೇರಿದಂತೆ ಕಾಂಗ್ರೆಸ್ ಮುಖಂಡರು ಪ್ರಚಾರ ನಡೆಸಿದರು. ಇನ್ನೊಂದಡೆ ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಪರವಾಗಿ ಸಂಸದ ಬಿ.ವೈ ರಾಘವೇಂದ್ರ, ವಿಧಾನ ಪರಿಷತ್ ವಿರೋಧಪಕ್ಷದ ನಾಯಕ ಅರವಿಂದ ಬೆಲ್ಲದ, ಶಾಸಕ ಬೈರತಿ ಬಸವರಾಜ, ಮಾಜಿ ಸಚಿವ ಶ್ರೀರಾಮುಲು ಪ್ರಚಾರ ನಡೆಸಿದರು. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ವಿರೂಪಾಕ್ಷಿಪುರ ಗ್ರಾಮದಲ್ಲಿ ಎನ್.ಡಿ.ಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ವಿರೋಧ ಪಕ್ಷದ ನಾಯಕ ಆರ್.ಅಶೋಕ ಸೇರಿದಂತೆ ಹಲವರು ಮತ ಯಾಚಿಸಿದರು. ಚನ್ನಪಟ್ಟಣ ತಾಲ್ಲೂಕಿನ ಕೋಡಂಬಳ್ಳಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ತಾಂಡ್ಯ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಮತ್ತು ಡಿ.ಕೆ.ಸುರೇಶ್ ಚುನಾವಣಾ ಪ್ರಚಾರ ನಡೆಸಿದರು. ಇನ್ನೊಂದೆಡೆ ಸಂಡೂರಿನಲ್ಲೂ ಚುನಾವಣಾ ಪ್ರಚಾರ ಬಿರುಸುಗೊಂಡಿದ್ದು, ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ಪರ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ತಿಮಲಾಪುರ, ಏಳುಗಂಜಿಯಲ್ಲಿ ಪ್ರಚಾರ ನಡೆಸಿದರು.

*******

**ರಾಜ್ಯ ಸರ್ಕಾರ ಜಾರಿಗೆ** ತಂದಿರುವ ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪಿದ್ದು, ಜನರ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ತಂದಿವೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬಳ್ಳಾರಿ ಜಿಲ್ಲೆ ಕುರುಗೋಡು ತಾಲೂಕಿನ ತಿಮ್ಮಲಾಪುರ ಗ್ರಾಮದಲ್ಲಿ ನಿನ್ನೆ ಸಂಡೂರು ಉಪ ಚುನಾವಣೆಯ ಪ್ರಚಾರ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸಾಕಷ್ಟು ಪೂರಕವಾಗಲಿದೆ ಎಂದರು. ವಕ್ಫ್ ಆಸ್ತಿ ವಿಚಾರದಲ್ಲಿ ವಿಪಕ್ಷ ಬಿಜೆಪಿ ರಾಜಕೀಯ ಮಾಡುತ್ತಿದೆ. ರೈತರಿಗೆ ನೀಡಿರುವ ನೋಟಿಸಗಳನ್ನು ವಾಪಾಸು ಪಡೆಯುವಂತೆ ಮುಖ್ಯಮಂತ್ರಿ ಸೂಚಿಸಿದ್ದಾರೆ. ಯಾವ ರೈತರ ಭೂಮಿ ಕಸಿದುಕೊಳ್ಳುವುದಿಲ್ಲ ಎಂದು ಉಪ ಮುಖ್ಯಮಂತ್ರಿ ಸ್ಪಷ್ಟಪಡಿಸಿದರು.

*******

**ಮಹಾತ್ಮಾ ಗಾಂಧೀಜಿಯವರ** ಅಧ್ಯಕ್ಷತೆಯಲ್ಲಿ 1924 ರಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆಗೆ ಸರ್ಕಾರ ನಿರ್ಧರಿಸಿದೆ ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಈ ಮಾಹಿತಿ ನೀಡಿದ ಅವರು, ಆಚರಣೆ ಮೂಲಕ ಗಾಂಧೀಜಿಯವರ ತತ್ವ ಸಿದ್ಧಾಂತಗಳನ್ನು ಇನ್ನ ್ಟ ಪ್ರಚುಪಡಿಸಲು ಹಾಗೂ ಮನೆ ಮನೆಗೆ ಗಾಂಧೀಜಿ ಸಿದ್ಧಾಂತಗಳನ್ನು ತಲುಪಿಸುವ ಉದ್ದೇಶದಿಂದ 'ಗಾಂದೀ ಭಾರತ' ಕಾರ್ಯಕ್ರಮ ಆಯೋಜಿಸಲಾಗುವುದು ಎಂದರು. ಅಕ್ಟೋಬರ್ 2 ರಿಂದ ಒಂದು ವ ್ದ ಕಾಲ ಶತಮಾನೋತ್ಸವ ಆಚರಿಸಲಾಗುವುದು. ವಿಧಾನಮಂಡಲದ ಜಂಟಿ ಅಧಿವೇಶನವನ್ನು ಬೆಳಗಾವಿಯಲ್ಲಿಯೇ ನಡೆಸಲು ನಿರ್ಧರಿಸಲಾಗಿದ್ದು, ಸರ್ಕಾರ 25 ಕೋಟಿ ರೂಪಾಯಿ ನೀಡಲಿದೆ ಎಂದು ಸಚಿವ ಎಚ್.ಕೆ.ಪಾಟೀಲ್ ಮಾಹಿತಿ ನೀಡಿದರು.

*******

**ರಾಜ್ಯದಲ್ಲಿ ರೇಷ್ಮೆ ಉತ್ಪಾದನೆ** ಹೆಚ್ಚಿಸಲು ರೇಷ್ಮೆ ಮಾರುಕಟ್ಟೆಗಳ ಸ್ಥಾಪನೆ ಮಾಡಲಾಗುವುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆಎಚ್. ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಯಂಬ್ರಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಹೈನುಗಾರಿಕೆ ಮತ್ತು ರೇಷ್ಮೆ ಕೃಷಿ ರೈತರ ಆರ್ಥಿಕ ಸ್ವಾವಲಂಬನೆಗೆ ಸಹಕಾರಿಯಾಗಿದ್ದು, ಮುಂದಿನ ಬಜೆಟ್‌ನಲ್ಲಿ ಹಾಲು ಉತ್ಪಾದಕರಿಗೆ ಪ್ರೋತ್ಸಾಹ ಧನ, ರೇಷ್ಮೆ ಮತ್ತು ಹೈನುಗಾರಿಕೆಗೆ ಹೆಚ್ಚಿನ ಪ್ರೋತ್ಸಾಹ ನೀಡಲಾಗುವುದು ಎಂದು ಅವರು ಹೇಳಿದರು.

*******

**ಮೈಸೂರು ನಗರಾಭಿವೃದ್ಧಿ** ಪ್ರಾಧಿಕಾರದ ನಿವೇಶನ ಹಂಚಿಕೆ ಆರೋಪದಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಿಬಿಐಗೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಕುಟುಂಬದ ವಿರುದ್ಧದ ತನಿಖೆಯನ್ನು ಸಿಬಿಐಗೆ ವಹಿಸುವಂತೆ ಕೋರಲಾದ ಅರ್ಜಿಗೆ ಸಂಬಂಧಿಸಿದಂತೆ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ, ಮಲ್ಲಿಕಾರ್ಜುನಸ್ವಾಮಿ ಜಮೀನು ಮಾಲೀಕ ಜೆ. ದೇವರಾಜು ಅವರಿಗೂ ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿ ನಾಗಪ್ರಸನ್ನ ನೇತೃತ್ವದ ಪೀಠ ಪ್ರಕರಣ ಸಂಬಂಧ ನಡೆದ ತನಿಖೆಯ ವರದಿಯನ್ನು ಇದೇ 26 ರೊಳಗೆ ನ್ಯಾಯಾಲಯಕ್ಕೆ ಸಲ್ಲಿಸುವಂತೆ ಲೋಕಾಯುಕ್ತ ಪೊಲೀಸರಿಗೆ ಸೂಚನೆ ನೀಡಿದೆ.

*******

**ಕಳೆದ ಒಂದೂವರೆ ವರ್ಷದಿಂದ** ಕಾಂಗ್ರೆಸ್ ಸರ್ಕಾರ ವಿರೋಧ ಪಕ್ಷಗಳನ್ನು ಗುರಿಯಾಗಿಸಿಕೊಂಡು ದಮನಕಾರಿ ಪ್ರವೃತ್ತಿ ಅನುಸರಿಸುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ. ಚನ್ನಪಟ್ಟಣದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿರಿಯ ಪೊಲೀಸ್ ಅಧಿಕಾರಿಯೊಬ್ಬರ ದೂರಿನ ಆಧಾರದ ಮೇಲೆ ತಮ್ಮ ವಿರುದ್ಧ ಪ್ರಕರಣ ದಾಖಲಿಸಿರುವುದು ಸರಿಯಲ್ಲ. ತಮ್ಮ ವಿರುದ್ಧ ಮಾತ್ರವಲ್ಲ, ಚನ್ನಪಟ್ಟಣ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಹಾಗೂ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕರ ವಿರುದ್ಧವೂ ಪ್ರಕರಣ ದಾಖಲಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಪ್ರಶ್ನಿಸುವ ಅವಕಾಶಗಳಿವೆ ಎಂದರು. ಸರ್ಕಾರದ ಈ ಧೋರಣೆಗಳನ್ನು ಜನರು ಗಮನಿಸುತ್ತಿದ್ದು, ಬರುವ ಉಪಚುನಾವಣೆಯಲ್ಲಿ ಸರಿಯಾದ ಉತ್ತರ ನೀಡಲಿದ್ದಾರೆ ಎಂದು ಕುಮಾರಸ್ವಾಮಿ ಹೇಳಿದರು.

*******

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಎರಡನೆ ಹಂತದ ಭಾರತ್** ಅಕ್ಕಿ ಮತ್ತು ಗೋಧಿ ಹಿಟ್ಟು ಮಾರಾಟಕ್ಕೆ ಕೇಂದ್ರ ಗ್ರಾಹಕ ವ್ಯವಹಾರ, ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆ ಸಚಿವ ಪ್ರಲ್ಹಾದ್ ಜೋಷಿ ದೆಹಲಿಯ ಕೃಷಿ ಭವನದಲ್ಲಿ ನಿನ್ನೆ ಚಾಲನೆ ನೀಡಿದರು. ಕೇಂದ್ರ ಸರ್ಕಾರ, ಕೇಂದ್ರೀಯ ಭಂಡಾರ, ರಾಷ್ಟ್ರೀಯ ಸಹಕಾರಿ ಗ್ರಾಹಕ ಒಕ್ಕೂಟ, ನಫೆಡ್ ಜೊತೆಯಾಗಿ ಇ–ಕಾಮರ್ಸ್ ಅಂಗಡಿಗಳು, ವಾಣಿಜ್ಯ ಮತ್ತು ದೊಡ್ಡ ಸರಣಿಯ ಚಿಲ್ಲರೆ ವ್ಯಾಪಾರಿಗಳು ಹಾಗೂ ಮೊಬೈಲ್ ವ್ಯಾನ್‌ಗಳ ಮೂಲಕ ಭಾರತ್ ಬ್ರಾಂಡ್ ಅಕ್ಕಿಯನ್ನು ಪ್ರತಿ ಕೆ.ಜಿಗೆ 34 ರೂಪಾಯಿ, ಗೋಧಿ ಹಿಟ್ಟನ್ನು 30 ರೂಪಾಯಿ ದರದಲ್ಲಿ ಒದಗಿಸಲಿದೆ ಎಂದರು.

*******

**ಧಾರವಾಡ ಜಿಲ್ಲೆಯ** ಏಳು ತಾಲ್ಲೂಕುಗಳಲ್ಲಿ ಅತಿವೃಷ್ಠಿಯಿಂದ ಉಂಟಾದ ಬೆಳೆ ಹಾನಿ ಪರಿಹಾರ ಪಾವತಿಸುವ ಕುರಿತು ಹಾನಿಯಾದ ಕ್ಷೇತ್ರದ ವಿವರಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲೆಯ ಏಳು ತಾಲೂಕುಗಳು ಸೇರಿ ಒಟ್ಟು 54,491.17 ಹೆಕ್ಟೆರ ಕೃಷಿ ಕ್ಷೇತ್ರದಲ್ಲಿ ಮತ್ತು 11,161.52 ಹೆಕ್ಟೆರ ತೋಟಗಾರಿಕೆ ಕ್ಷೇತ್ರ ಸೇರಿ ಒಟ್ಟು 65,652.69 ಹೆಕ್ಟರ್ ಕ್ಷೇತ್ರಗಳಲ್ಲಿ ಜಂಟಿ ಸಮೀಕ್ಷೆಯ ಪರಿಶೀಲನಾ ವರದಿಯಂತೆ ಬೆಳೆ ಹಾನಿಯಾದ ರೈತರ ಪಟ್ಟಿಯನ್ನು ಜಿಲ್ಲಾಧಿಕಾರಿ, ಉಪವಿಭಾಧಿಕಾರಿ, ತಹಶೀಲ್ದಾರ, ಗ್ರಾಮ ಪಂಚಾಯತ್, ರೈತ ಸಂಪರ್ಕ ಕೇಂದ್ರಗಳಲ್ಲಿ ಪ್ರಕಟಿಸಲಾಗಿದೆ ಎಂದು ತಿಳಿಸಿದ್ದಾರೆ. ಈ ಕುರಿತು ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ಲಿಖಿತ ಆಕ್ಷೇಪಣೆಗಳನ್ನು ಸಂಬಂಧಿಸಿದ ತಹಶೀಲ್ದಾರ, ಕೃಷಿ, ತೋಟಗಾರಿಕಾ ಇಲಾಖೆಗಳ ತಾಲ್ಲೂಕು ಕಛೇರಿ ಅಥವಾ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರಗಳಲ್ಲಿ ಏಳು ದಿನಗಳೊಳಗಾಗಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

*******

**ಜಿಲ್ಲೆಯ ಎಲ್ಲಾ** ಇಲಾಖೆಗಳಲ್ಲಿ ಅನುಸೂಚಿತ ಜಾತಿ, ಪಂಗಡ ಉಪ ಹಂಚಿಕೆ ಯೋಜನೆಯಡಿ ಮೀಸಲಿಟ್ಟಿರುವ ಅನುದಾನ ವೆಚ್ಚ ಮಾಡುವುದರ ಮೂಲಕ, ಯೋಜನೆಯಲ್ಲಿ ಸಂಪೂರ್ಣ ಗುರಿ ಸಾಧಿಸಬೇಕು ಎಂದು ಉತ್ತರ ಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿ ಪ್ರಿಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕಾರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಿನ್ನೆ ನಡೆದ, ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಎಲ್ಲಾ ಇಲಾಖೆಗಳು ಈ ಯೋಜನೆಯಡಿ ಮೀಸಲಿಟ್ಟಿರುವ ಅನುದಾನದಲ್ಲಿ ಪ.ಜಾತಿ ಮತ್ತು ಪಂಗಡದ ಫಲಾನುಭವಿಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವುದರ ಮೂಲಕ ಅವರ ಅಭಿವೃದ್ಧಿಗೆ ನೆರವು ನೀಡಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

*******

**ತುಮಕೂರು ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ** ಜಲ ಜೀವನ್ ಮಿಷನ್ ಯೋಜನೆಯ ಕಾಮಗಾರಿಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳದ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು ತಿಳಿಸಿದ್ದಾರೆ. ಜಲ್ ಜೀವನ್ ಮಿಷನ್ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಜನರ ಮನೆ ಬಾಗಿಲಿಗೆ ನೀರು ಒದಗಿಸುವ ಮಹತ್ವದ ಜಲ್ ಜೀವನ್ ಮಿಷನ್ ಯೋಜನೆ ಅನುಷ್ಠಾನದಲ್ಲಿ ಯಾವುದೇ ಅಕ್ರಮ ನಡೆಯದಂತೆ ನಿಗಾವಹಿಸಬೇಕು. ಒಂದು ವರ್ಷದೊಳಗಾಗಿ ಕಾಮಗಾರಿಯಲ್ಲಿ ಯಾವುದೇ ಲೋಪದೋಷಗಳು ಕಂಡು ಬಂದಲ್ಲಿ ಅವುಗಳನ್ನು ಸರಿಪಡಿಸುವ ಜವಾಬ್ದಾರಿ ಸಂಪೂರ್ಣವಾಗಿ ಗುತ್ತಿಗೆದಾರರ ಮೇಲಿರುತ್ತದೆ ಎಂದು ತಿಳಿಸಿದರು.

*******

**ಈಗ ಸಂಕ್ಷಿಪ್ತ ಸುದ್ದಿಗಳು**

**ಸುಪ್ರೀಂಕೋರ್ಟ್ ಸಂಸ್ಥಾಪನೆಯ** 75ನೇ ವರ್ಷಾಚರಣೆ ಹಿನ್ನೆಲೆ, ನ್ಯಾಯಾಂಗ ಕುರಿತ ಮೂರು ಪುಸ್ತಕಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ದೆಹಲಿಯಲ್ಲಿ ನಿನ್ನೆ ಬಿಡುಗಡೆ ಮಾಡಿದರು.

**ಉಪ ಲೋಕಾಯುಕ್ತ** ನ್ಯಾಯಮೂರ್ತಿ ಬಿ.ವೀರಪ್ಪ ಅವರು ಇದೇ 15 ರಿಂದ 17 ರವರೆಗೆ ಕಲಬುರಗಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ನಗರದ ಡಾ.ಎಸ್.ಎಂ.ಪಂಡಿತ್ ರಂಗಮಂದಿರದಲ್ಲಿ ಸಾರ್ವಜನಿಕ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆ ನಡೆಸಲಿದ್ದಾರೆ.

**ಇದೇ ತಿಂಗಳ 10 ರಂದು** ಚಿಕ್ಕಮಗಳೂರು ಜಿಲ್ಲೆಯ ದತ್ತಪೀಠದಲ್ಲಿ ದತ್ತಮಾಲೆ ಅಭಿಯಾನ ನಡೆಯಲಿದ್ದು, ಈ ಭಾಗದ ಕೆಲ ಪ್ರವಾಸಿ ತಾಣಗಳಿಗೆ ಪ್ರವಾಸಿಗರು ಭೇಟಿ ನೀಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಆದೇಶ ಹೊರಡಿಸಿದ್ದಾರೆ.

**ಪಿಂಚಣಿದಾರರ ಕಲ್ಯಾಣ** ಇಲಾಖೆ ಸಹಯೋಗದೊಂದಿಗೆ ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ಇದೇ 1 ರಿಂದ 30 ರವರೆಗೆ ಜೀವನ ಪ್ರಮಾಣ ಪತ್ರ ಅಭಿಯಾನ ಆರಂಭಿಸಿದೆ.

**ವಿವಿಧ ಇಲಾಖೆಗಳ ಸಹಯೋಗದಲ್ಲಿ** ಜಿಲ್ಲಾ ತೋಟಗಾರಿಕೆ ಇಲಾಖೆ ಇದೇ 16 ರಿಂದ 18 ರವರೆಗೆ 2 ದಿನಗಳ ಕಾಲ ಜಿಲ್ಲಾ ಮಟ್ಟದ ಫಲ ಪುಷ್ಪ ಪ್ರದರ್ಶನವನ್ನು ಹುಬ್ಬಳ್ಳಿಯ ಇಂದಿರಾ ಗಾಜಿನ ಮನೆ ಆವರಣದಲ್ಲಿ ಆಯೋಜಿಸಿದೆ.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ವಿಧಾನಸಭಾ** ಉಪಚುನಾವಣೆ: ವಿವಿಧ ರಾಜಕೀಯ ಪಕ್ಷಗಳ ಮುಖಂಡರಿಂದ ಬಿರುಸಿನ ಪ್ರಚಾರ.

**ಗ್ಯಾರಂಟಿ ಯೋಜನೆಗಳು** ಜನರಿಗೆ ತಲುಪಿದ್ದು, ಜನರ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ತಂದಿವೆ–ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್.

**ಬೆಳಗಾವಿಯಲ್ಲಿ ನಡೆದ** ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆಗೆ ಸರ್ಕಾರದ ನಿರ್ಧಾರ– ಕಾನೂನು ಸಚಿವ ಎಚ್.ಕೆ. ಪಾಟೀಲ್.

**ಮುಡಾ ನಿವೇಶನ ಹಂಚಿಕೆ** ಪ್ರಕರಣ: ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಿಬಿಐಗೆ ಹೈಕೋರ್ಟ ನೋಟಿಸ್

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**
**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

****END****